# ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ

3ನೇ ಮಹಡಿ, 5ನೇ ಹಂತ, ಬಹುಮಹಡಿ ಕಟ್ಟಡ, ಡಾ॥ ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-01

ಸಂಖ್ಯೆ: ಮಾಹಆ 64 ಆಡಳಿತ 2021

ದಿನಾಂಕ 03/08/2021

## ಪ್ರಕಟಣೆ

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ ಮಂಜೂರಾದ ಈ ಕೆಳಕಾಣಿಸಿದ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ನೇಮಕಾತಿಯು ಪ್ರಥಮತಃ 6 ತಿಂಗಳ ಅವಧಿಗೆ ಅಥವಾ ನೇಮಕಾತಿಯಾದವರ ಸೇವೆಯು ತೃಪ್ತಿಕರವೆಂದು ಕಂಡುಬಂದಲ್ಲಿ ಪುನಃ ಮುಂದುವರೆಸುವುದು ಆಯೋಗದ ವಿವೇಚನೆಗೆ ಒಳಪಟ್ಟಿರುತ್ತದೆ.

**ಸೂಕ್ತ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.**

| ಕ್ರ ಸಂ | ಪದನಾಮ | ವೇತನ | ಹುದ್ದೆಗಳ ಸಂಖ್ಯೆ | ಅರ್ಹತೆ/ ವಿದ್ಯಾರ್ಹತೆ ಮತ್ತು ಅನುಭವ |
|---|---|---|---|---|
| 1. | ಅಪರ ನಿಬಂಧಕರು | ರೂ.51,550/- ಪ್ರತಿ ಮಾಹೆ ಮತ್ತು ಕಛೇರಿಗೆ ಬರಲು ವಾಹನ ಸೌಲಭ್ಯ / ವಾಹನ ಭತ್ಯೆ | 01 | i. ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು.<br>ii. ಉಚ್ಚ ನ್ಯಾಯಾಲಯದಲ್ಲಿ ವಿಲೇಖನಾಧಿಕಾರಿಯಾಗಿ ಅಥವಾ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು.<br>iii. ಕಂಪ್ಯೂಟರ್ ವಿಷಯದಲ್ಲಿ ಜ್ಞಾನ ಹೊಂದಿದವರು ಹಾಗೂ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಇರುವವರಿಗೆ ಆದ್ಯತೆ ನೀಡಲಾಗುವುದು. |
| 2. | ಸಹಾಯಕ ನಿಬಂಧಕರು | ರೂ.52,650/- ಪ್ರತಿ ಮಾಹೆ | 01 | i. ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು.<br>ii. ಉಚ್ಚ ನ್ಯಾಯಾಲಯ ಅಥವಾ ಕರ್ನಾಟಕ ರಾಜ್ಯದ ಇತರೆ ನ್ಯಾಯಾಲಯಗಳಲ್ಲಿ ಸಹಾಯಕ ನಿಬಂಧಕರ ಅಥವಾ ತತ್ಸಮಾನ ಹುದ್ದೆಯಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿರಬೇಕು.<br>iii. ಕಂಪ್ಯೂಟರ್ ವಿಷಯದಲ್ಲಿ ಜ್ಞಾನ ಹೊಂದಿದವರು ಹಾಗೂ ಕನ್ನಡ ಮತ್ತು |

| | | | | |
|---|---|---|---|---|
| | | | | ಆಂಗ್ಲ ಭಾಷೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಇರುವವರಿಗೆ ಆದ್ಯತೆ ನೀಡಲಾಗುವುದು. |
| 3. | ಕೋರ್ಟ್ ಅಧಿಕಾರಿ | ರೂ.43,100/- ಪ್ರತಿ ಮಾಹೆ | 01 | i. ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು. ಎಲ್‌ಎಲ್‌ಎಂ ಪದವಿ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.<br>ii. ಉಚ್ಚ ನ್ಯಾಯಾಲಯದಲ್ಲಿ ಅಥವಾ ಇತರೆ ನ್ಯಾಯಾಲಯಗಳಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು.<br>iii. ಕಂಪ್ಯೂಟರ್ ವಿಷಯದಲ್ಲಿ ಜ್ಞಾನ ಹೊಂದಿದವರು ಹಾಗೂ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಇರುವವರಿಗೆ ಆದ್ಯತೆ ನೀಡಲಾಗುವುದು. |
| 4. | ತೀರ್ಪು ಬರಹಗಾರರು | ರೂ.37,900/- ಪ್ರತಿ ಮಾಹೆ | 01 | i. ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು. ಎಲ್‌ಎಲ್‌ಎಂ ಪದವಿ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.<br>ii. ಉಚ್ಚ ನ್ಯಾಯಾಲಯದಲ್ಲಿ ಅಥವಾ ಇತರೆ ನ್ಯಾಯಾಲಯಗಳಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿದವರಾಗಿರಬೇಕು.<br>iii. ಕಂಪ್ಯೂಟರ್ ವಿಷಯದಲ್ಲಿ ಜ್ಞಾನ ಹೊಂದಿದವರು ಹಾಗೂ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಇರುವವರಿಗೆ ಆದ್ಯತೆ ನೀಡಲಾಗುವುದು. |

| | | | | |
|---|---|---|---|---|
| 5. | ಕಾನೂನು ಸಹಾಯಕರು/ ಸಂಶೋಧನಾ ಸಹಾಯಕರು | ರೂ.33,450/– ಪ್ರತಿ ಮಾಹೆ | 02 | i. ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾನಿಲಯದಿಂದ ಕಾನೂನು ಪದವಿ ಪಡೆದವರಾಗಿರಬೇಕು. ಎಲ್.ಎಲ್.ಎಂ ಪದವಿ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.<br>ii. ಕಾನೂನು ಕ್ಷೇತ್ರದಲ್ಲಿ ಅನುಭವ ಹೊಂದಿದವರಾಗಿರಬೇಕು.<br>iii. ಕಂಪ್ಯೂಟರ್ ವಿಷಯದಲ್ಲಿ ಜ್ಞಾನ ಹೊಂದಿದವರು ಹಾಗೂ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಹೊಂದಿರಬೇಕು. |
| 6. | ಶೀಘ್ರಲಿಪಿಗಾರರು | ರೂ.27,650/– ಪ್ರತಿ ಮಾಹೆ | 02 | i. ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದವರಾಗಿರಬೇಕು.<br>ii. ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಸೀನಿಯರ್ ಗ್ರೇಡ್ ನಲ್ಲಿ ಶೀಘ್ರಲಿಪಿ ಹಾಗೂ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು.<br>iii. ಕಂಪ್ಯೂಟರ್ ವಿಷಯದಲ್ಲಿ ಜ್ಞಾನ ಹೊಂದಿದವರು ಹಾಗೂ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಹೊಂದಿರಬೇಕು. |
| 7. | ಸಹಾಯಕರು | ರೂ.30,350/– ಪ್ರತಿ ಮಾಹೆ | 01 | i. ಕಂಪ್ಯೂಟರ್ ಸೈನ್ಸ್‌ನಲ್ಲಿ ಪದವೀಧರರಾಗಿರಬೇಕು.<br>ii. ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಹೊಂದಿರಬೇಕು. |
| 8. | ವಾಹನ ಚಾಲಕರು | ರೂ.21,400/– ಪ್ರತಿ ಮಾಹೆ | 01 | i. 10ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದವರಾಗಿರಬೇಕು.<br>ii. ಪ್ರಸ್ತುತ ಮಾನ್ಯತೆ ಪಡೆದ ಲಘು ಮೋಟಾರು ವಾಹನ ಚಾಲನಾ ಪರವಾನಗಿ ಹೊಂದಿರಬೇಕು.<br>iii. ಕನ್ನಡ ಓದುವ ಮತ್ತು ಬರೆಯುವ ಜ್ಞಾನವುಳ್ಳವರಾಗಿರಬೇಕು. |
| ಒಟ್ಟು | | | 10 | |

ದಿನಾಂಕ 01/07/2021ಕ್ಕೆ 62 ವರ್ಷ ವಯೋಮಿತಿ ಒಳಗಿನ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು.

ಈ ನೇಮಕಾತಿಗಳು ತಾತ್ಕಾಲಿಕವಾಗಿ ನಿಗಧಿತ ಅವಧಿಗೆ ಅಥವಾ ಸರ್ಕಾರದಿಂದ ನಿಯೋಜನೆ ಮೇರೆಗೆ ಭರ್ತಿಯಾಗುವವರೆಗೆ ಅಥವಾ ಸರ್ಕಾರದಿಂದ ಕ್ರಮಬದ್ಧ ನೇಮಕಾತಿಯಾಗುವವರೆಗೆ ಅಥವಾ ಆಯೋಗದ ಮುಂದಿನ ಆದೇಶದವರೆಗೆ ಆಯೋಗದ ವಿವೇಚನೆಗೊಳಪಟ್ಟಿರುತ್ತವೆ.

ಈಗಾಗಲೇ ಆಯೋಗಕ್ಕೆ ಯಾವುದೇ ಹುದ್ದೆಗೆ ನೇರವಾಗಿ ಅರ್ಜಿ ಸಲ್ಲಿಸಿರುವವರೂ ಸಹ ಈ ಪ್ರಕಟಣೆಯನ್ನು ಉಲ್ಲೇಖಿಸಿ ಮತ್ತೊಮ್ಮೆ ಅರ್ಜಿ ಸಲ್ಲಿಸಬೇಕು. ಅವರು ಈಗಾಗಲೇ ಸಲ್ಲಿಸಿರುವ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

**ಆಸಕ್ತಿ ಇರುವ ಅಭ್ಯರ್ಥಿಗಳು ನಿಗದಿತ ಪ್ರಪತ್ರದಲ್ಲಿ ಮುಚ್ಚಿದ ಲಕೋಟೆಯಲ್ಲಿ ಅಂಚೆ ಮೂಲಕ ಅಥವಾ ಇ-ಮೇಲ್ ಮೂಲಕ ದಿನಾಂಕ 04/09/2021 ರಂದು ಅಥವಾ ಅದಕ್ಕಿಂತ ಮುಂಚಿತವಾಗಿ ತಲುಪುವಂತೆ ಸಲ್ಲಿಸಬಹುದು.** ಲಕೋಟೆಯ ಮತ್ತು ಅರ್ಜಿಯ ಮೇಲೆ "______________ ಹುದ್ದೆಗಾಗಿ ಅರ್ಜಿ" ಎಂದು ನಮೂದಿಸಿರಬೇಕು. ಪ್ರಕಟಣೆಯ ಹಾಗೂ ಪ್ರಪತ್ರದ ವಿವರಗಳು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಂತರ್ಜಾಲ ಪುಟ www.kshrc.karnataka.gov.in ನಲ್ಲಿ ಲಭ್ಯವಿರುತ್ತದೆ. ಇ-ಮೇಲ್ ವಿಳಾಸ: secretary-kshrc@karnataka.gov.in.

ಅರ್ಜಿಯನ್ನು ಈ ಕೆಳಕಾಣಿಸಿದ ವಿಳಾಸಕ್ಕೆ ಕಳುಹಿಸುವುದು:

ಕಾರ್ಯದರ್ಶಿಗಳು,
ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ,
5ನೇ ಹಂತ, ಬಹುಮಹಡಿ ಕಟ್ಟಡ, 3ನೇ ಮಹಡಿ,
ಬೆಂಗಳೂರು-560001.

ಕಾರ್ಯದರ್ಶಿ,
ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ